ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು. ದಿನಾಂಕಃ 24.02.2025..
**ಮುಖ್ಯ ವಿಚಾರಣೆಃ** ಅರ್ಜಿದಾರ ಪರ ಶ್ರೀ ಎನ್.ಆರ್. ವಕೀಲರಿಂದಃ

ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯದಿಂದಾ ಕೂಡಿದ್ದು, ಅದನ್ನು ನನ್ನ ಸೂಚನೆಯ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

ಇಂದು ನಾನು ಅರ್ಜಿಗೆ ಸಂಬಂಧಪಟ್ಟಂತೆ ಕೆಲವು ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ, ಅವುಗಳನ್ನು ನನ್ನ ಪರವಾಗಿ ಪರಿಗಣಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

ದೂರಿನ ಪ್ರತಿಯನ್ನು ನಿಪಿ-1 ಎಂದು, ಪ್ರ.ವರದಿಯನ್ನು ನಿಪಿ-2 ಎಂದು, ಪಂಚನಾಮೆಯನ್ನು ನಿಪಿ-3 ಎಂದು, ಐಎಂಇ ವರದಿಯನ್ನು ನಿಪಿ-4 ಎಂದು, ಗಾಯದ ಎರಡು ವರದಿಯಗಳನ್ನು ಕ್ರಮವಾಗಿ ನಿಪಿ-5 ಮತ್ತು 6 ಎಂದು, ವಾಹನದ ಬಿ ಎಕ್ಸ್ಟ್ರಾಕ್ಟ್ ನ್ನು ನಿಪಿ-7 ಎಂದು, ವಿಮೆ ಪ್ರತಿಯನ್ನು ನಿಪಿ-8 ಎಂದು, ಡಿಎಲ್‌ನ್ನು ನಿಪಿ-9 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಅರ್ಜಿದಾರ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಆಳಂದ.**